**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಂ.ಪಿ. ಸುಜಾ ಕುಶಾಲಪ್ಪ ಇವರು ಮಂಡಿಸಿರುವ ಶೂನ್ಯ ವೇಳೆಯಲ್ಲಿ ಪ್ರಸ್ತಾಪ**

**ಪ್ರಸ್ತಾಪ:**

ದಿನಾಂಕ: 03.07.2023 ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಯಾದ ಗುಡ್ಡ ಕುಸಿತದ ವರದಿಗಳು ಕೊಡಗಿನ ಜನರಲ್ಲಿ ಆತಂಕ ಉಂಟು ಮಾಡಿದೆ.

ರಾಜ್ಯದ ಮಲೆನಾಡು ಮತ್ತು ಕರಾವಳಿ ಪ್ರದೇಶದಲ್ಲಿ ಪ್ರತಿ ವರ್ಷ ಮಳೆಗಾಲದಲ್ಲಿ ಭೂಕುಸಿತ, ಗುಡ್ಡ ಕುಸಿತದಂತಹ ಘಟನೆಗಳು ಸಂಭವಿಸಿ ಭಾರಿ ಹಾನಿಯಾಗುತ್ತಿದ್ದರು ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿಲ್ಲ. ರಾಜ್ಯದ ಮಲೆನಾಡು, ಕರಾವಳಿ ಭಾಗಗಳಲ್ಲಿ ಪ್ರತಿ ಮಳೆಗಾಲದಲ್ಲಿ ಗಂಭೀರ ಸ್ವರೂಪದ ಭೂಕುಸಿತಗಳು ಸಂಭವಿಸುತ್ತಿವೆ. ಈಗ ಮಳೆಗಾಲ ಆರಂಭವಾಗಿದ್ದು, ಜನರು ಚಿಂತೆಗೆ ಈಡಾಗಿದ್ದಾರೆ. 2009 ರಿಂದ ಈಚೆಗೆ ನಿರಂತರ ಭೂಕುಸಿತವಾಗುತ್ತಿದ್ದು, ಕಾರಾವರ ಸಮೀಪದ ಕಾಡವಾಡದಲ್ಲಿ ಪಟಿಸಿದ ಭಾರೀ ಭೂಕುಸಿತವೇ ರಾಜ್ಯದ ಪಶ್ಚಿಮಘಟ್ಟ ಕಂಡ ಈ ಶತಮಾನದ ಮೊದಲ ದೊಡ್ಡ ಭೂಕುಸಿತ ಇರಬೇಕೆಂದು ತಜ್ಞರ ಸಮಿತಿಯು ಅಭಿಪ್ರಾಯ ಪಟ್ಟಿದೆ. ಅನಂತರ ಪ್ರತಿವರ್ಷ ಒಂದಿಲ್ಲೊಂದು ಕಡೆ ಭೂಕುಸಿತ ಸಂಭವಿಸುತ್ತಲೇ ಇದೆ. 2018ರಲ್ಲಿ ಕೊಡಗಿನಲ್ಲಿ ವ್ಯಾಪಕ ಭೂಕುಸಿತವಾಗಿ ಅಪಾರ ಪ್ರಮಾಣದ ಸಾವು ನೋವು ಸಂಭವಿಸಿತ್ತು. ನಂತರ 2019 ಹಾಗೂ 2020ರಲ್ಲಿ ದಕ್ಷಿಣ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಗಣನೀಯವಾಗಿ ಭೂಕುಸಿತವಾಗಿದೆ. ಇಸ್ರೋ ಅಂಗಸಂಸ್ಥೆಯಾದ ಎನ್ ಆರ್ ಎಸ್ಸಿ, ಜಿಎಸ್ಐ ಪಶ್ಚಿಮಘಟ್ಟದಲ್ಲಿ ಇದುವರೆಗೆ ಆದ ಭೂಕುಸಿತದ ಕುರಿತು ಸರ್ಕಾರಕ್ಕೆ ಸಲ್ಲಿಸಿದ ವರದಿಯಂತೆ ಭವಿಷ್ಯದಲ್ಲಿ ರಾಜ್ಯದ 23 ತಾಲ್ಲೂಕುಗಳಲ್ಲಿ ಭೂಕುಸಿಯುವ ಸಾಧ್ಯತೆ ಇದೆ ಎಂಬ ವರದಿಯನ್ನು ನೀಡಿದೆ.

ಆದ್ದರಿಂದ ರಾಜ್ಯ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡುವ ಈ ಬಗ್ಗೆ ಪರಿಶೀಲಿಸಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸುತ್ತೇನೆ.

**ಉತ್ತರ:**

ರಾಜ್ಯದ ಮಲೆನಾಡು ಮತ್ತು ಕರಾವಳಿ ಪ್ರದೇಶದಲ್ಲಿ ಪ್ರತಿ ವರ್ಷ ಮಳೆಗಾಲದಲ್ಲಿ ಭೂಕುಸಿತ, ಗುಡ್ಡ ಕುಸಿತದಂತಹ ಘಟನೆಗಳು ಸಂಭವಿಸಿ ಭಾರಿ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ರಾಜ್ಯದಲ್ಲಿ ಭೂಕುಸಿತದಿಂದಾಗುವ ಅಪಾಯಗಳನ್ನು ತಗ್ಗಿಸಲು 15ನೇ ಹಣಕಾಸಿನ ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ಕೊಡಗು ಹಾಗೂ ಚಿಕ್ಕಮಗಳೂರು ಜಿಲ್ಲೆಗಳಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ. 40.00 ಕೋಟಿ ಅನುದಾನವನ್ನು ಮಂಜೂರು ಮಾಡಿದೆ. ಇಸ್ರೋ ಅಂಗಸಂಸ್ಥೆಯಾದ ಎನ್ ಆರ್ ಎಸ್ಸಿ ಹಾಗೂ ಜಿಎಸ್ಐ ಪಶ್ಚಿಮಘಟ್ಟದಲ್ಲಿ ಇದುವರೆಗೆ ಆದ ಭೂಕುಸಿತದ ಕುರಿತು ಸರ್ಕಾರಕ್ಕೆ ಸಲ್ಲಿಸಿದ ವರದಿಯನ್ವಯ ಮಲೆನಾಡು ಮತ್ತು ಕರಾವಳಿ ಜಿಲ್ಲೆಯ 23 ತಾಲ್ಲೂಕುಗಳಲ್ಲಿ ಭೂಕುಸಿತ ಸಂಭವಿಸಬಹುದಾದಂತಹ ಪ್ರದೇಶಗಳನ್ನು ಗುರುತಿಸಿ ಆಯಾ ಜಿಲ್ಲಾಧಿಕಾರಿಗಳಿಗೆ ಭೂಕುಸಿತ ಅಪಾಯಗಳನ್ನು ತಗ್ಗಿಸಲು ಯೋಜನೆಗಳನ್ನು ತಯಾರಿಸಿ ಸಲ್ಲಿಸುವಂತೆ ಸೂಚಿಸಲು ಕ್ರಮವಹಿಸಲಾಗುತ್ತಿದೆ.

ಭೂಕುಸಿತ ಮುನ್ಸೂಚನೆ ವ್ಯವಸ್ಥೆಯನ್ನು ಅಭಿವೃದ್ಧಿ ಪಡಿಸಲು ಹಾಗೂ ಭೂಕುಸಿತ ತಡೆಯಲು ಅಧ್ಯಯನ ಕೈಗೊಳ್ಳಲು ಭಾರತೀಯ ಭೂ ಸರ್ವೇಕ್ಷಣಾ ಇಲಾಖೆ (ಜಿಎಸ್ಐ) ಮತ್ತು ನ್ಯಾಷನಲ್ ಇನ್ಸ್‌ಟ್ಯೂಟ್ ಆಫ್ ರಾಕ್ ಮೆಕಾನಿಕ್ಸ್ ಸಂಸ್ಥೆ (ಎನ್ಐಆರ್ಎಂ) ಯೋಜನಾ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಪತ್ರ ಬರೆಯಲಾಗಿದೆ.

ಸಂಖ್ಯೆ: ಕಂಇ 325 ಟಿಎನ್ಆರ್ 2023

(ಕೃಷ್ಣ ಭೈರೇಗೌಡ)
ಕಂದಾಯ ಸಚಿವರು